ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಮತ್ತು ಆ) ಹೌದು ಸರ್ಕಾರದ ಪರಿಶೀಲನೆಯಲ್ಲಿದೆ

959 (974) ಶ್ರೀ ಶಿವಶಂಕರ್‌ರೆಡ್ಡಿ ಎನ್ ಎಚ್ (ಗೌರಿಬಿದನೂರು) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

ಅ) ರೈತರ ಕೃಷಿ ಸಾಲ ಮನ್ನಾ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರು ಆಶ್ವಾಸನೆ ನೀಡಿರುವುದು ನಿಜವಲ್ಲವೇ,

ಆ) ಹಾಗಿದ್ದಲ್ಲಿ, ರೈತರ ಕೃಷಿ ಸಾಲ ಮನ್ನಾ ಮಾಡಲು ಸರ್ಕಾರವು ಅನುಸರಿಸುವ ಮಾನದಂಡವೇನು, (ವಿವರ ಒದಗಿಸುವುದು)

ಇ) ಸಾಲ ಮನ್ನಾ ಮಾಡಲು ಸರ್ಕಾರವು ಜರೂರಾಗಿ ಕ್ರಮ ಕೈಗೊಳ್ಳುವುದೇ?

ಶ್ರೀ ಜಿ ಟಿ ದೇವೇಗೌಡ (ಸಹಕಾರ ಸಚಿವರು)

ಅ), ಆ) ಮತ್ತು ಇ) ಸಹಕಾರಿ ಸಂಸ್ಥೆಗಳು ರೈತರಿಗೆ ನೀಡಿರುವ ಕೃಷಿ ಸಾಲಗಳನ್ನು ಮನ್ನಾ ಮಾಡುವ ಪ್ರಸ್ತಾವವು ಸರ್ಕಾರದ ಪರಿಶೀಲನೆಯಲ್ಲಿ ಇರುತ್ತದೆ

960 (1018) ಶ್ರೀ ಶಿವಶಂಕರ್‌ರೆಡ್ಡಿ ಎನ್ ಹೆಚ್ (ಗೌರಿಬಿದನೂರು) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

ಅ) ಸ್ಥಳೀಯ ಸಂಸ್ಥೆಗಳ ಚುನಾವಣೆ ನಿಗದಿತ ಸಮಯದಲ್ಲಿ ನಡೆಸುವ ಉದ್ದೇಶ ಸರ್ಕಾರಕ್ಕಿದೆಯೇ,

ಆ) ಹಾಗಿದ್ದಲ್ಲಿ, ಇರುವ ತೊಡಕುಗಳು ಏನು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು)

ಅ) ಸರ್ಕಾರವು ನಿಗದಿತ ಸಮಯದಲ್ಲಿ ಚುನಾವಣೆಯನ್ನು ನಡೆಸಲು ಉದ್ದೇಶಿಸಿದೆ ಆದರೆ, ಉಚ್ಚ ನ್ಯಾಯಾಲಯದ ಆದೇಶದನ್ವಯ 2001ರ ಜನಗಣತಿಯನ್ವಯ ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡುಗಳ ಕ್ಷೇತ್ರಗಳ ಮರುವಿಂಗಡಣೆ ಹಾಗೂ ಮೀಸಲಾತಿಯಿಂದ ಚುನಾವಣೆ ನಡೆಸಲು ವಿಳಂಬವಾಗಿದೆ

ಆ) ಸರ್ಕಾರವು ಮೀಸಲಾತಿ ಬಗ್ಗೆ ಕರ್ನಾಟಕ ಮರನಭೆ ಕಾಯ್ದೆ 1964ರ ಕಲಂ 11 ಹಾಗೂ ಕರ್ನಾಟಕ ಮಹಾನಗರ ಪಾಲಿಕೆ ಕಾಯ್ದೆ 1976ರ ಕಲಂ 7ರನ್ವಯ ಮಾರ್ಗಸೂಚಿಯನ್ನು ಹೊರಡಿಸಿ ಅದರನ್ವಯ ಮೀಸಲಾತಿಯನ್ನು ನಿಗದಿಪಡಿಸಿ ಹೊರಡಿಸಿದ ಆದೇಶಕ್ಕೆ ಮಾನ್ಯ ರಾಜ್ಯ ಉಚ್ಚ

ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ 7107/06 ಮತ್ತು 7871/06ರಲ್ಲಿ (ಸಿಂಧನೂರು ಪ್ರಕರಣ) ದಿನಾಂಕ 16–6–2006ರಂದು ನೀಡಿರುವ ತೀರ್ಪಿನನ್ವಯ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ಕ್ಷೇತ್ರಗಳನ್ನು 2001ರ ಜನಗಣತಿಯನ್ವಯ ಪರಿಷ್ಕರಿಸುವ (ಶಹಾಬಾದ್ ಮರನಭೆ ಮತ್ತು ಮಂಗಳೂರು ಮಹಾನಗರ ಪಾಲಿಕೆ ಹೊರತುಪಡಿಸಿ) ಪ್ರಕ್ರಿಯೆಗಳು ದಿನಾಂಕ 19–1–2007ರಂದು ಮುಕ್ತಾಯಗೊಂಡಿದೆ ಈ ಹಿನ್ನೆಲೆಯಲ್ಲಿ ಕರ್ನಾಟಕ ಮರನಭೆ ಕಾಯ್ದೆ 1964ರ ಕಲಂ 11(2–6) ಹಾಗೂ 352(2–8) ರನ್ವಯ ನಗರ ಸ್ಥಳೀಯ ಸಂಸ್ಥೆಗಳಿಗೆ ಮೀಸಲಾತಿಯನ್ನು ನಿಗದಿಪಡಿಸುವ ಬಗ್ಗೆ ಕರ್ನಾಟಕ ಮರಸಭೆ ಕಾಯ್ದೆ 1964ರ ಕಲಂ 321(1)ರನ್ವಯ ಜಿಲ್ಲಾಧಿಕಾರಿಗಳಿಗೆ ಮೀಸಲಾತಿಯನ್ನು ನಿಗದಿಪಡಿಸುವಂತೆ ನಿರ್ದೇಶನ ನೀಡಲಾಗಿತ್ತು ಆದರೆ, ಕೆಲವು ಜಿಲ್ಲಾಧಿಕಾರಿಗಳು ಸರ್ಕಾರವು ನೀಡಿರುವ ಮಾರ್ಗಸೂಚಿಗಳ ಬಗ್ಗೆ ಸ್ಪಷ್ಟೀಕರಣ ಕೋರಿದ್ದು, ಈ ಬಗ್ಗೆ ಕಾನೂನು ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿದೆ ಕಾನೂನು ಇಲಾಖೆಯ ಅಭಿಪ್ರಾಯ ಬಂದ ತಕ್ಷಣ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಮೀಸಲಾತಿಯನ್ನು ನಿಗದಿಪಡಿಸಿ ಚುನಾವಣೆ ನಡೆಸುವ ಬಗ್ಗೆ ಕ್ರಮ ವಹಿಸುವಂತೆ ರಾಜ್ಯ ಚುನಾವಣಾ ಆಯೋಗವನ್ನು ಕೋರಲಾಗುವುದು

961 (1019) ಶ್ರೀ ಶಿವಶಂಕರ್ ರೆಡ್ಡಿ ಎನ್ ಹೆಚ್ (ಗೌರಿಬಿದನೂರು) ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

ಅ) 5ನೇ ವೇತನ ಆಯೋಗ ತನ್ನ ಪೂರ್ಣ ವರದಿಯನ್ನು ಸಲ್ಲಿಸುವಲ್ಲಿ ವಿಳಂಬವಾಗುತ್ತಿರುವುದರಿಂದ ನೌಕರರುಗಳಿಗೆ ತುಂಬಾ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ವಿಳಂಬ ಧೋರಣೆಗೆ ಕಾರಣವೇನು,

ಇ) ಈ 5ನೇ ವೇತನದ ಆಯೋಗ ಯಾವಾಗ ತನ್ನ ಪೂರ್ಣ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ ಹಾಗೂ ಎಂದಿನಿಂದ ಅನುಷ್ಠಾನಗೊಳಿಸಿ ನೌಕರರಿಗೆ ಅನುಕೂಲ ಮಾಡಿ ಕೊಡಲಾಗುವುದು?

ಶ್ರೀ ಬಿ ಎನ್ ಯಡಿಯೂರಪ್ಪ (ಮಾನ್ಯ ಉಪ ಮುಖ್ಯಮಂತ್ರಿಗಳು)

ಅ) ಇಲ್ಲ

ಆ) ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 11 ಎಸ್‌ಆರ್‌ಪಿ 2003 ದಿನಾಂಕ 21ನೇ ಜೂನ್ 2005ರಲ್ಲಿ ರಾಜ್ಯ ಸರ್ಕಾರಿ ನೌಕರರ ವೇತನ